# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಟಾಟಾ ಪವರ್ ಕಂಪನಿ ಲಿಮಿಟೆಡ್ ಕಂಪನಿಯವರಿಗೆ ಹಂಚಿಕೆಯಾಗಿರುವ 8.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 60.00 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 255 ಎನ್‌ಸಿಇ 2011 ದಿನಾಂಕ: 10.6.2011.
2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 255 ಎನ್‌ಸಿಇ 2011 ದಿನಾಂಕ: 03.09.2011.
3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/08/TATA-8.00 to 60MW-Koppal/ 2012/ 999 ದಿನಾಂಕ: 30/31.03.2012.
4) ದಿನಾಂಕ 03.11.2012ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಹನುಮಸಾಗರ ವಿಂಡ್ ಪವರ್ ಪ್ರಾಜೆಕ್ಟ್ಸ್ ಕಂಪನಿಗೆ ಕೊಪ್ಪಳ ಜಿಲ್ಲೆಯ ಹನುಮಸಾಗರ ತಾಲ್ಲೂಕಿನ ಮಾವಿನಯಿಟಗಿ, ಬೀಳಗಿ ಮತ್ತು ಚಂದ್ರಗಿರಿ ಗ್ರಾಮಗಳಲ್ಲಿ ಮಂಜೂರಾಗಿದ್ದ 8.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ:: ಟಾಟಾ ಪವರ್ ಕಂಪನಿ ಲಿಮಿಟೆಡ್ ರವರಿಗೆ ವರ್ಗಾವಣೆ ಮಾಡಿ ಆದೇಶಿಸಲಾಗಿತ್ತು. ಸದರಿ ಆದೇಶದ **Longitude** 76°59'35"- 76°2'31" E ನ್ನು **Longitude**: 75°59'35"- 76°2'31" E ಎಂದು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ತಿದ್ದುಪಡಿಮಾಡಿ ಆದೇಶಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ : ಟಾಟಾ ಪವರ್ ಕಂಪನಿ ಲಿಮಿಟೆಡ್ ಕಂಪನಿಯವರಿಗೆ ಕೊಪ್ಪಳ ಜಿಲ್ಲೆಯ ಹನುಮಸಾಗರ ತಾಲ್ಲೂಕಿನ ಮಾವಿನಯಿಟಗಿ, ಬೀಳಗಿ ಮತ್ತು ಚಂದ್ರಗಿರಿ ಗ್ರಾಮಗಳಲ್ಲಿ ಮಂಜೂರಾಗಿರುವ 8.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 60.00 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಮತ್ತು ಯೋಜನೆಯನ್ನು 2013-14ರೊಳಗೆ ಅನುಷ್ಠಾನಗೊಳಿಸುವ ಷರತ್ತಿನೊಂದಿಗೆ ಹಾಗೂ ಯೋಜನಾ ಪ್ರದೇಶವು ಅರಣ್ಯ ಜಮೀನಾಗಿದ್ದು, ಅರಣ್ಯ ಇಲಾಖೆಯ ಅನುಮತಿ ಪಡೆಯತಕ್ಕದೆಂದು ಹಾಗೂ ಉತ್ಪಾದಿಸುವ ವಿದ್ಯುತ್ತನ್ನು ಸಂಬಂಧಪಟ್ಟ ಎಸ್ಕಾಂನೊಂದಿಗೆ ಪಿಪಿಎ ಮೂಲಕ ಸರಬರಾಜು ಮಾಡಬೇಕೆಂಬ ಷರತ್ತು ವಿಧಿಸಲು ಸೂಚಿಸಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯು ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಶಿಫಾರಸ್ಸು ಮಾಡಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 144 ಎನ್‌ಸಿಇ 2012,**
**ಬೆಂಗಳೂರು, ದಿನಾಂಕ: 12.02.2013.**

ಮೆ : ಟಾಟಾ ಪವರ್ ಕಂಪನಿ ಲಿಮಿಟೆಡ್ ಇವರಿಗೆ ಕೊಪ್ಪಳ ಜಿಲ್ಲೆಯ ಹನುಮಸಾಗರ ತಾಲ್ಲೂಕಿನ ಮಾವಿನಯಿಟಗಿ, ಬೀಳಗಿ ಮತ್ತು ಚಂದ್ರಗಿರಿ ಗ್ರಾಮಗಳಲ್ಲಿ **ಮಂಜೂರಾಗಿರುವ 8.00 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 60.00** ಮೆ.ವ್ಯಾ. **ಸಾಮರ್ಥ್ಯಕ್ಕೆ** ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು **ಹೆಚ್ಚಿಸಿ** ಆದೇಶಿಸಿದೆ.

Wind Section
Inward No. 12786
Date: 21-02-13
Sig.........

......2

| Near by villages of the proposed area and District | Geographical Area Details of the Project | Sanctioned capacity in MW | Enhancement Proposed in MW | No. of WTGs & rating in KW | including proposed enhancement in MW |
|---|---|---|---|---|---|
| Mavinitage, Bilgi and Chandragiri, Hanumasagar Taluk, Koppal District | The proposed area consists of two plateaus oriented in NW-SE and North-South direction and is located on the North and North-West of Hanumasagar town. The external features of the area depicts it is a open scrub and covered with boulders as per the SOI Map. The area is covered in the following Geographical co-oridinates :- **Latitude**: 15°52'11"- 15°54'53" N **Longitude**: 75°59'35"- 76°2'31" E **Ridge peaks**: 701, 707 & 662m AMSL. | 8.00 MW | 52 MW | 40 Nos. x 1500 Kw | 60.00 |

1 **ಮೆ:: ಟಾಟಾ ಪವರ್ ಕಂಪನಿ ಲಿಮಿಟೆಡ್** ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 **ಮೆ:: ಟಾಟಾ ಪವರ್ ಕಂಪನಿ ಲಿಮಿಟೆಡ್** ರವರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

3 ಸದರಿ ಯೋಜನೆಗೆ ಅರಣ್ಯ ಇಲಾಖೆಯಿಂದ Forest Conservation Act ರಡಿಯಲ್ಲಿ ಅನುಮತಿ ಪಡೆಯತಕ್ಕದ್ದು.

4 ಅಭಿವೃದ್ಧಿದಾರರು ಸಾಮರ್ಥ್ಯ ವಿಸ್ತರಣಾ ಶುಲ್ಕವನ್ನು ಕ್ರೆಡಲ್ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಮುಂಚೆ ಪಾವತಿಸತಕ್ಕದ್ದು.

5 ಸದರಿ ಯೋಜನೆಯನ್ನು 2013-14 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

6 ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

12/2

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ಕೊಪ್ಪಳ ಜಿಲ್ಲೆ, ಕೊಪ್ಪಳ.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಗುಲ್ಬರ್ಗಾ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಕೊಪ್ಪಳ ಜಿಲ್ಲೆ, ಕೊಪ್ಪಳ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
10. ಮೆ:: ಟಾಟಾ ಪವರ್ ಕಂಪನಿ ಲಿಮಿಟೆಡ್, ಕಾರ್ಪೊರೇಟ್ ಸೆಂಟರ್, 'ಎ' ಬ್ಲಾಕ್, 34 ಸಂತ ತುಕಾರಾಮ ರಸ್ತೆ, ಮುಂಬಾಯಿ-09.
11. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.